ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಮರಳು ವಾಹನ ಹಿಡಿದು ಲಕ್ಷಾಂತರ ರೂಪಾಯಿ ವಸೂಲಿ ಮಾಡುತ್ತಿರುವ ಬಗ್ಗೆ

ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –

453 (573) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕಾರವಾರ ಜಿಲ್ಲೆಯ ಜೋಯಿಡಾ ತಾಲ್ಲೂಕಿನ ರಾಮನಗರ ಮರಳು ಅಡ್ಡೆ ಮೇಲೆ ಅನಾವಶ್ಯಕ ಜೋಯಿಡಾ ಪೊಲೀಸ್ ಅಧಿಕಾರಿ ದಾಳಿ ನಡೆಸಿ ಲಕ್ಷಾಂತರ ಹಣ ಪಡೆದು ಪ್ರಕರಣ ದಾಖಲಿಸದೇ ವಾಹನ ಬಿಡುತ್ತಿರುವುದು ಗೋವಾ ಗಡಿಭಾಗದಲ್ಲಿರುವ ಅಣಮೋಡಾ ತಪಾಸಣೆ ನಾಕೆಯಲ್ಲಿಯೂ ಕೂಡಾ ಮದ್ಯವನ್ನು ಸಾಗಿಸುವಾಗ ಪ್ರಕರಣ ದಾಖಲಿಸುವ ಬದಲಾಗಿ ಅವರಿಂದ ಲಕ್ಷಾಂತರ ರೂಪಾಯಿ ಹಣ ಪಡೆದ ಸಣ್ಣ ಪ್ರಕರಣವನ್ನು ಬೇರೆಯವರ ಮೇಲೆ ದಾಖಲಿಸಿ ಕೈ ತೊಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ಮಾಹಿತಿ ನೀಡುವುದು)

(ಆ) ಈ ರೀತಿ ಬೇಜವಾಬ್ದಾರಿ ತನದಿಂದ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಅಧಿಕಾರಿಗಳ ಮೇಲೆ ಸಾರ್ವಜನಿಕರು ಲಿಖಿತ ದೂರು ನೀಡಿದರೂ ಮೇಲಾಧಿಕಾರಿಗಳು ಇಲ್ಲಿಯವರೆಗೆ ಯಾವುದೇ ರೀತಿಯಲ್ಲಿ ತನಿಖೆ ಮಾಡದೆ ಉತ್ತರ ನೀಡುವುದು ಸಂಶಯಕ್ಕೆ ಆಸ್ಪದವಾಗಿದ್ದು, ಈ ಬಗ್ಗೆ ತನಿಖೆ ಮಾಡಲಾಗುವುದೇ; (ವಿವರ ನೀಡುವುದು)

(ಇ) ಸದರಿ ವಿಷಯದಲ್ಲಿ ಸಾರ್ವಜನಿಕರು/ಜನ ಪ್ರತಿನಿಧಿಗಳು ಸಂಬಂಧಿಸಿದ ಇಲಾಖಾ ಮೇಲಾಧಿಕಾರಿಗೆ ಲಿಖಿತ ಪತ್ರದ ಮುಖಾಂತರ ತನಿಖೆ ಮಾಡಲು ವಿನಂತಿಸಿ ಪತ್ರ ನೀಡಿದರೂ ಇಲ್ಲಿಯವರೆಗೆ ಯಾವುದೇ ರೀತಿಯಲ್ಲಿ ಸ್ಪಂದಿಸದಿರುವ ಅಧಿಕಾರಿಯ ಕಾರ್ಯ ವೈಖರಿ ಬಗ್ಗೆ ಸರ್ಕಾರ ವರದಿ ಪಡೆದು ಕ್ರಮ ಕೈಗೊಳ್ಳಲಾಗುವುದೇ? (ವಿವರ ನೀಡುವುದು)